## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿಜಾಪುರ ಜಿಲ್ಲೆ ವಿಜಾಪುರ, ಇಂಡಿ ಮತ್ತು ಬಸವನಬಾಗೇವಾಡಿ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ತುರ್ತು ಕುಡಿಯುವ ನೀರಿನ ಕಾಮಗಾರಿಗಳಿಗೆ ವಿಶೇಷ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ವಿಜಾಪುರ ರವರ ಪ್ರಸ್ತಾವನೆ ಸಂಖ್ಯೆ:ಜಿಪಂಅ/ಉಖಾಯೋ/ಸಿಆರ್-23/2008-09, ದಿ:14.03.2011 ಮತ್ತು ದಿ:19.07.2011.

--

**ಪೀಠಿಕೆ:**

ವಿಜಾಪುರ ಜಿಲ್ಲೆ ವಿಜಾಪುರ, ಇಂಡಿ ಮತ್ತು ಬಸವನಬಾಗೇವಾಡಿ ವ್ಯಾಪ್ತಿಯ ಗ್ರಾಮೀಣ ಪ್ರದೇಶಗಳಲ್ಲಿ ತೀವ್ರ ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿದ್ದ ಜನವಸತಿಗಳಲ್ಲಿ 59 ಕೊಳವೆ ಭಾವಿಗಳನ್ನು ಕೊರೆದ ಪ್ರಯುಕ್ತ ಗುತ್ತಿಗೆದಾರರಿಗೆ ಪಾವತಿಸಬೇಕಾಗಿರುವ ಬಾಕಿ ಬಿಲ್ ಬಾಬ್ತು ರೂ.37.70ಲಕ್ಷ ಅನುದಾನ ಬಿಡುಗಡೆ ಮಾಡಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ವಿಜಾಪುರ ಇವರು ಸರ್ಕಾರವನ್ನು ವಿನಂತಿಸಿರುತ್ತಾರೆ. ಈ ಕುರಿತು ಪರಿಶೀಲಿಸಿ ಗುತ್ತಿಗೆದಾರರಿಗೆ ಪಾವತಿಸಬೇಕಾಗಿರುವ ಬಾಕಿ ಬಿಲ್ ಬಾಬ್ತು ರೂ.37.70ಲಕ್ಷಗಳನ್ನು ವಿಜಾಪುರ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಲು ನಿರ್ಧರಿಸಿದೆ. ಆದ್ದರಿಂದ, ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 31 ಗ್ರಾನೀಸ(3)2009 ಬೆಂಗಳೂರು, ದಿನಾಂಕ:03.08.2011**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ ವಿಜಾಪುರ ಜಿಲ್ಲಾ ಪಂಚಾಯತ್ ವ್ಯಾಪ್ತಿಯ, ವಿಜಾಪುರ, ಇಂಡಿ ಮತ್ತು ಬಸವನಬಾಗೇವಾಡಿ ತಾಲ್ಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸಲು 59 ಕುಡಿಯುವ ನೀರಿನ ಕಾಮಗಾರಿಗಳ ಬಾಕಿ ಬಿಲ್ ಪಾವತಿಗಾಗಿ ರೂ.37.70ಲಕ್ಷ(ಮುವತ್ತೇಳು ಲಕ್ಷದ ಎಪ್ಪತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು 2011-12ನೇ ಸಾಲಿಗೆ ರಾಜ್ಯ ವಲಯದ C & Q ಘಟಕದಡಿ ವಿಜಾಪುರ ಜಿಲ್ಲಾ ಪಂಚಾಯತ್‌ಗೆ ಹೆಚ್ಚುವರಿಯಾಗಿ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಅನುಷ್ಠಾನಗೊಳಿಸಿರುವ ಕಾಮಗಾರಿಗಳ ವಿವರಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಿಯ ಮಾಹಿತಿಗಾಗಿ ಕಳುಹಿಸುವುದು. ಪ್ರಸ್ತಿತ ಕಾಮಗಾರಿಗಳು 2011-12ರ ಸಾಲಿನ ಕ್ರಿಯಾಯೋಜನೆಯಡಿ ಸೇರ್ಪಡೆಯಾಗದಿರುವುದನ್ನು ಖಾತ್ರಿ ಪಡಿಸಿಕೊಳ್ಳತಕ್ಕದ್ದು.

3. ಈ ಅನುದಾನವನ್ನು ರಾಜ್ಯವಲಯದ ಲೆಕ್ಕಶೀರ್ಷಿಕೆ:4215-01-102-9-01-059ಯಡಿ ಗಣನೆಗೆ ತೆಗೆದುಕೊಂಡು, RTGS ಮುಖೇನ ಈಗಾಗಲೇ Coverage & Qualityಯಡಿ ಗೊತ್ತುಪಡಿಸಿರುವ SWSM ಬ್ಯಾಂಕ್ ಖಾತೆ ಮುಖೇನ ವಿನಿಯೋಗಿಸತಕ್ಕದ್ದು. ಸಿಂಡಿಕೇಟ್ ಬ್ಯಾಂಕ್ ಮೂಲ ಖಾತೆ ಸಂಖ್ಯೆ:04462010091577ರಿಂದ Coverage & Quality ಕಾರ್ಯಕ್ರಮದ ಖಾತೆ ಸಂಖ್ಯೆ:04462010094572ಕ್ಕೆ ರೂ.37.70ಲಕ್ಷಗಳನ್ನು ವರ್ಗಾಯಿಸಿ, ಸದರಿ ಅನುದಾನದಿಂದ C&Q ಘಟಕದಡಿ ವಿಜಾಪುರ ಜಿಲ್ಲಾ ಪಂಚಾಯತ್ ಕಳುಹಿಸುವ ಬಿಲ್‌ಗಳನ್ನು ಮಾನ್ಯ ಮಾಡತಕ್ಕದ್ದು. ಸದರಿ ಅನುದಾನ ವಿನಿಯೋಗದ ಆರ್ಥಿಕ ಮತ್ತು ಭೌತಿಕ ಪ್ರಗತಿಗಳನ್ನು CE/PRED ಹಾಗೂ ವಿಜಾಪುರ ಜಿಲ್ಲಾ ಪಂಚಾಯತ್ IMISನಡಿ ದಾಖಲಿಸತಕ್ಕದ್ದು.

4. ಈ ಆದೇಶವನ್ನು ಆರ್ಥಿಕ ಇಲಾಖೆ ಸಹಮತಿ ಸಂಖ್ಯೆ: FD 149 Exp.6/2011, ದಿ:08.03.2011 ಹಾಗೂ ಗ್ರಾಅಪಂ.ರಾಜ್ ಇಲಾಖೆಯ IFAರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ/03/ಆಂ.ಆ.ಸ/2011, ದಿ:01.04.2011ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಾಮಕೃಷ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಗಳು:

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು–2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು–1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು–1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು–1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ಇವರ ಆಪ್ತ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾಮಂಡಳಿ, ಸಂಕೀರ್ಣ ನಂ55, 4ನೇ ಮಹಡಿ, ಅಭಯ ಕಾಂಪ್ಲೆಕ್ಸ್, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು–20.
12. ಜಿಲ್ಲಾಧಿಕಾರಿಗಳು, ವಿಜಾಪುರ.
13. ಜಿಲ್ಲಾ ಪಂಚಾಯತ್ ಅಧ್ಯಕ್ಷರು, ವಿಜಾಪುರ.
14. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು, ವಿಜಾಪುರ.
15. ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ವಿಜಾಪುರ, ಇಂಡಿ ಮತ್ತು ಬಸವನಬಾಗೇವಾಡಿ.
16. ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಅಭಿಯಂತರರು, ಧಾರವಾಡ.
17. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಇಂಜಿನಿಯರ್, ವಿಜಾಪುರ.
18. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, PRED, ಬೆಂಗಳೂರು–20.
19. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿ (ಪಂ,ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
20. ನಿರ್ದೇಶಕರು KRWSSA ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ/ನಿರ್ದೇಶಕರು(ಗ್ರಾಮಸ್ವರಾಜ್)/ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರುಗಳ ಆಪ್ತ ಸಹಾಯಕರು.
21. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು–9.
22. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
23. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
24. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
25. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
26. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ (10 ಪ್ರತಿಗಳು).
27. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.